# Bangalore
# Regional News
# 06.04.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ವಿಧಾನಸಭಾ ಉಪಚುನಾವಣೆ; ಬಹಿರಂಗ ಪ್ರಚಾರಕ್ಕೆ ನಾಳೆ ತೆರೆ; ರಾಜಕೀಯ ಪಕ್ಷಗಳಿಂದ ಬಿರುಸಿನ ಪ್ರಚಾರ
2. ಜನಸಂಖ್ಯೆಯು ಕ್ಷೇತ್ರ ಪುನರ್ ವಿಂಗಡಣೆಗೆ ಮಾನದಂಡವಾಗಬಾರದು– ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಭಿಮತ
3. ಮಂಡ್ಯ ಜಿಲ್ಲೆಯಲ್ಲಿ ಬೇಡಿಕೆಗೆ ತಕ್ಕಂತೆ ಅನಿಲ ದಾಸ್ತಾನು– ಸಾರ್ವಜನಿಕರು ಆತಂಕಪಡುವ ಅಗತ್ಯ ಇಲ್ಲ– ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ
4. ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಪರಿಶೀಲನೆಗೆ ಉಚ್ಚ ನ್ಯಾಯಾಲಯ ಸೂಚನೆ
5. ಇಂಡಿಯಾ ಸ್ಕಿಲ್ಸ್ 2025–26 ರಾಷ್ಟ್ರೀಯ ಸ್ಪರ್ಧೆಯಲ್ಲಿ ಕರ್ನಾಟಕಕ್ಕೆ 3ನೇ ಸ್ಥಾನ

***************

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಇನ್ನು ಮೂರು ದಿನ ಬಾಕಿ ಉಳಿದಿದೆ. ನಾಳೆ ಬಹಿರಂಗ ಪ್ರಚಾರಕ್ಕೆ ತೆರೆ ಬೀಳಲಿದೆ. ಈ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳು ಇಂದು ಉಭಯ ಕ್ಷೇತ್ರಗಳಲ್ಲಿ ಬಿರುಸಿನ ಪ್ರಚಾರ ನಡೆಸುತ್ತಿವೆ.

ದಾವಣಗೆರೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ್ ಪರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸ ಕರಿಯಪ್ಪ ಪರ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಚಾರ ನಡೆಸಿದರು.

ಇನ್ನೊಂದೆಡೆ ಬಾಗಲಕೋಟೆಯಲ್ಲಿ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಪರ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಮತ ಯಾಚಿಸಿದರು. ಈ ವೇಳೆ ಮಾತನಾಡಿದ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ಅಭ್ಯರ್ಥಿ ಹತ್ತು ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಸಚಿವ ಜಮೀರ್ ಅಹಮ್ಮದ್ ಖಾನ್, ವಾಂಬೆ ಕಾಲೋನಿಯಲ್ಲಿ ಮತಯಾಚನೆ ಮಾಡಿದರು. ಸಚಿವ ಆರ್.ಬಿ.ತಿಮ್ಮಾಪುರ ಮಾತನಾಡಿ, ಕಾಂಗ್ರೆಸ್ ಅಭ್ಯರ್ಥಿಗೆ ನಿರೀಕ್ಷೆಗೂ ಮೀರಿ ಮತಗಳು ಸಿಗಲಿವೆ ಎಂದು ಹೇಳಿದ್ದಾರೆ.

***************

ಬಾಗಲಕೋಟೆಯಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಸ್ವೀಪ್ ಕಾರ್ಯಕ್ರಮದಡಿ ಇಂದು ಬೈಕ್ ರ್‍ಯಾಲಿ ಆಯೋಜಿಸಲಾಗಿತ್ತು.

ಜಿಲ್ಲಾಧಿಕಾರಿ ಸಂಗಪ್ಪ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಜಿಲ್ಲಾಡಳಿತ ಭವನದ ಮುಖ್ಯ ದ್ವಾರದಲ್ಲಿ ರ್‍ಯಾಲಿಗೆ ಚಾಲನೆ ನೀಡಿದರು. ನಂತರ ಅಧಿಕಾರಿಗಳು ಹಾಗೂ ನೌಕರರು ಬೈಕ್‌ಗಳಲ್ಲಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸಾರ್ವಜನಿಕರ ಗಮನ ಸೆಳೆದರು.

ರ್‍ಯಾಲಿಯಲ್ಲಿ "ನಿಮ್ಮ ಹಕ್ಕು, ನಿಮ್ಮ ಧ್ವನಿ", "ನಿಮ್ಮ ಮತ ನಿಮ್ಮ ಭವಿಷ್ಯ", "ಓಟ್ ಮಾಡಿದವನೇ ಹೀರೋ" ಎಂಬ ಘೋಷಣೆಗಳನ್ನು ಕೂಗುತ್ತಾ ಮತದಾನ ಜಾಗೃತಿ ಸಂದೇಶ ಹರಡಲಾಯಿತು.

***************

ಜನಸಂಖ್ಯೆಯು ಕ್ಷೇತ್ರ ಪುನರ್ ವಿಂಗಡಣೆಗೆ ಮಾನದಂಡವಾಗಬಾರದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದ ಪ್ರಸ್ತಾವಿತ ವಿಧಾನಸಭೆ ಮತ್ತು ಲೋಕಸಭಾ ಕ್ಷೇತ್ರಗಳ ಪುನರ್ ವಿಂಗಡಣೆ ಕುರಿತು ಪ್ರತಿಕ್ರಿಯಿಸಿ, ಉತ್ತರ ಭಾರತದಲ್ಲಿ ಹೆಚ್ಚಿನ ಜನಸಂಖ್ಯೆ ಇದ್ದು, ಜನಸಂಖ್ಯೆಯನ್ನು ಮಾನದಂಡವನ್ನಾಗಿ ಬಳಸುವುದರಿಂದ ಕರ್ನಾಟಕ ಕಡಿಮೆ ಲೋಕಸಭಾ ಸ್ಥಾನಗಳನ್ನು ಪಡೆಯುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ, ಒಳಮೀಸಲಾತಿ ಜಾರಿಗೆ ತರಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಮಂಡ್ಯ ಜಿಲ್ಲೆಯಲ್ಲಿ ಗೃಹ ಬಳಕೆಗೆ ನಿತ್ಯ ಹತ್ತು ಸಾವಿರದ 800 ಸಿಲಿಂಡರ್ ಅಗತ್ಯವಿದ್ದು, ಬೇಡಿಕೆಗೆ ತಕ್ಕಂತೆ ಅನಿಲ ದಾಸ್ತಾನು ಲಭ್ಯವಿದ್ದು, ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಮಂಡ್ಯದಲ್ಲಿಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರ್ಥಿಕವಾಗಿ ಹಿಂದುಳಿದ ಸಾರ್ವಜನಿಕರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿದೆ. ಸರ್ಕಾರದ ಕಾರ್ಯಕ್ರಮವನ್ನು ಉದ್ದಿಮೆಯಾಗಿ ಪರಿವರ್ತಿಸಿ ಜಿಲ್ಲೆಯಲ್ಲಿ ನಿರುದ್ಯೋಗ ಕಡಿಮೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

***************

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ವಿಧಾನ ಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆಗೆ ಉಚ್ಚ ನ್ಯಾಯಾಲಯ ಇಂದು ಆದೇಶ ನೀಡಿದೆ.

2023ರಲ್ಲಿ ನಡೆದ ವಿಧಾನ ಸಭಾ ಕ್ಷೇತ್ರಗಳ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಟಿ.ಡಿ ರಾಜೇಗೌಡ 59 ಸಾವಿರದ 171 ಮತಗಳನ್ನು ಗಳಿಸಿ ಗೆಲುವು ಸಾಧಿಸಿದ್ದರು.

ಬಿಜೆಪಿಯ ಡಿ.ಎನ್. ಜೀವರಾಜ್ 58 ಸಾವಿರದ 970 ಒಟ್ಟು ಮತಗಳನ್ನು ಪಡೆದು 201 ಮತಗಳ ಅಂತರದಿಂದ ಸೋಲು ಕಂಡಿದ್ದರು.

ಪರಾಜಿತ ಅಭ್ಯರ್ಥಿ ಡಿ.ಎನ್ ಜೀವರಾಜ್ ಅಂಚೆ ಮತ ಎಣಿಕೆಯಲ್ಲಿ ಅಧಿಕಾರಿಗಳು ಲೋಪ ಎಸಗಿದ್ದಾರೆ. ರಾಜೇಗೌಡ ಅವರ ಆಯ್ಕೆಯನ್ನು ಅಸಿಂಧುಗೊಳಿಸಬೇಕು ಹಾಗೂ ಮರು ಮತ ಎಣಿಕೆ ನಡೆಸಬೇಕೆಂದು ನ್ಯಾಯಾಲಯದ ಮೆಟ್ಟಿಲೇರಿದ್ದರು. ವಾದ ಪ್ರತಿವಾದ ಆಲಿಸಿದ ನ್ಯಾಯಾಲಯವು ಅಂಚೆ ಮತಗಳ ಮರು ಏಣಿಕೆಗೆ ಆದೇಶ ನೀಡಿದೆ.

***************

ಕೌಶಲ್ಯ ಕ್ಷೇತ್ರದಲ್ಲಿ ರಾಜ್ಯ ದೇಶದಲ್ಲಿ ಮುಂಚೂಣಿಯತ್ತ ಸಾಗುತ್ತಿದೆ. ಗ್ರೇಟರ್ ನೋಯ್ಡಾದ ಇಂಡಿಯಾ ಎಕ್ಸ್‌ಪೋ ಮಾರ್ಟ್‌ನಲ್ಲಿ ನಡೆದ ಇಂಡಿಯಾ ಸ್ಕಿಲ್ಸ್ 2025-26 ರಾಷ್ಟ್ರೀಯ ಸ್ಪರ್ಧೆಯಲ್ಲಿ ಕರ್ನಾಟಕ 3ನೇ ಸ್ಥಾನ ಪಡೆದುಕೊಂಡಿದೆ.

32 ಕೌಶಲ್ಯ ವಿಭಾಗದಲ್ಲಿ ನಡೆದ ಸ್ಪರ್ಧೆಗಳಲ್ಲಿ 48 ಮಂದಿ ಭಾಗವಹಿಸಿದ್ದರು. ಒಟ್ಟು 29 ವಿಭಾಗದಲ್ಲಿ ಕರ್ನಾಟಕ ತನ್ನ ಪಾರಮ್ಯ ಮೆರೆದಿದೆ.

ಕ್ಲೌಡ್ ಕಂಪ್ಯೂಟಿಂಗ್, ಸೈಬರ್ ಸೆಕ್ಯುರಿಟಿ, ಮೆಕಾಟ್ರಾನಿಕ್ಸ್, ಸಂಯೋಜಕ ಉತ್ಪಾದನೆ, ಬೇಕರಿ ಮತ್ತು ದೃಶ್ಯ ವ್ಯಾಪಾರೀಕರಣ ಸೇರಿದಂತೆ ಹೈಟೆಕ್ ಮತ್ತು ಸೃಜನಶೀಲ ಕ್ಷೇತ್ರಗಳಲ್ಲಿ ಕರ್ನಾಟಕ ಗಮನಾರ್ಹ ಸಾಧನೆ ಮಾಡಿದೆ.

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ದಿಂದ ತರಬೇತಿ ಪಡೆದ ರಾಜ್ಯದ ವಿದ್ಯಾರ್ಥಿಗಳು 10 ಚಿನ್ನ, 6 ಬೆಳ್ಳಿ, 6 ಕಂಚು ಮತ್ತು 7 ಶ್ರೇಷ್ಠತೆ ಪದಕಗಳನ್ನು ಒಳಗೊಂಡಂತೆ ಒಟ್ಟು 29 ಪದಕಗಳನ್ನು ಪಡೆದುಕೊಂಡಿದ್ದಾರೆ.

ಚಿನ್ನ, ಬೆಳ್ಳಿ ಮತ್ತು ಕಂಚಿನ ಪದಕ ವಿಜೇತರು ಈಗ ಚೀನಾದ ಶಾಂಘೈನಲ್ಲಿರುವ ವಿಶ್ವ ಕೌಶಲ್ಯ ಅಂತಾರಾಷ್ಟ್ರೀಯ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸಲು ತರಬೇತಿ ಪಡೆಯಲಿದ್ದಾರೆ.

***************

ಮೈಸೂರು ಜಿಲ್ಲೆಯ ನಜರ್ ಬಾದ್ ನಲ್ಲಿರುವ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಇದೇ 19 ರಿಂದ 27 ರವರೆಗೆ ಅಗ್ನಿವೀರ್ ರ್‍ಯಾಲಿ ನಡೆಯಲಿದ್ದು, 6 ಸಾವಿರದ 235 ಅಭ್ಯರ್ಥಿಗಳು ಭಾಗವಹಿಸಲಿದ್ದಾರೆ ಎಂದು ಬೆಂಗಳೂರಿನ ಭಾರತೀಯ ಸೇನೆ ನೇಮಕಾತಿ ಅಧಿಕಾರಿ ಕರ್ನಲ್ ವಿವೇಕ್ ಜಾಮ್‌ದರ್ ತಿಳಿಸಿದ್ದಾರೆ.

ಅಗ್ನಿವೀರ್ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕಳೆದ ಸಾಲಿನ ಜೂನ್ ತಿಂಗಳಲ್ಲಿ ಲಿಖಿತ ಪರೀಕ್ಷೆ ನಡೆಸಲಾಗಿದ್ದು, ಎರಡನೇ ಹಂತದ ಪರೀಕ್ಷೆ ಇದೇ 19 ರಿಂದ ನಡೆಯಲಿದೆ ಎಂದು ಹೇಳಿದ್ದಾರೆ.

ಪ್ರತಿ ದಿನ 800 ಅಭ್ಯರ್ಥಿಗಳ ದೈಹಿಕ ಪರೀಕ್ಷೆ ಸೇರಿದಂತೆ ಇತರೆ ಪರೀಕ್ಷೆಗಳು ನಡೆಯಲಿದೆ. ದೈಹಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಮಾತ್ರ ವೈದ್ಯಕೀಯ ಪರೀಕ್ಷೆ ನಡೆಯಲಿದೆ. ಏಪ್ರಿಲ್ 27 ರಂದು ಮಹಿಳಾ ಅಭ್ಯರ್ಥಿಗಳ ರ್‍ಯಾಲಿ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

***************

ಗದಗ ಜಿಲ್ಲೆಯಲ್ಲಿ 2026-27 ರ ಮುಂಗಾರು ಹಂಗಾಮಿಗೆ ರಸಗೊಬ್ಬರಗಳ ಪೂರೈಕೆ, ದಾಸ್ತಾನು ಮತ್ತು ವಿತರಣಾ ವ್ಯವಸ್ಥೆ ಸುಗಮಗೊಳಿಸಲು ಕೃಷಿ ಇಲಾಖೆ ಸಮರೋಪಾದಿಯಲ್ಲಿ ಸಿದ್ಧತೆ ನಡೆಸುತ್ತಿದೆ.

ಮಧ್ಯ ಪ್ರಾಚ್ಯ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧದಿಂದಾಗಿ ಕಚ್ಚಾ ವಸ್ತುಗಳ ಆಮದಿನಲ್ಲಿ ವ್ಯತ್ಯಯವಾಗುವ ಸಾಧ್ಯತೆ ಇದ್ದು, ಈ ಬಾರಿ ರಸಗೊಬ್ಬರ ಉತ್ಪಾದನೆಯಲ್ಲಿ ಕುಸಿತವಾಗುವ ಸಂಭವವಿದೆ. ಇದರಿಂದ ರಸಗೊಬ್ಬರ ವಿತರಣೆಯ ಮೇಲೆ ವಿಶೇಷ ನಿಗಾ ಇರಿಸಲು ನಿರ್ಧರಿಸಲಾಗಿದೆ.

ಗದಗ ಜಿಲ್ಲೆಯಲ್ಲಿ ರಸಗೊಬ್ಬರ ಖರೀದಿ ಮಾಡಬೇಕು ಎಂದಾದರೆ ರೈತರು ಕಡ್ಡಾಯವಾಗಿ ಫ್ರೂಟ್ಸ್ ಐಡಿ ಹೊಂದಿರಬೇಕೆಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***************

ಸರ್ಕಾರದ ಪ್ರಮುಖ ಯೋಜನೆಗಳಾದ ಬರಪರಿಹಾರ, ಬೆಳೆ ವಿಮೆ, ಪಿ.ಎಂ ಕಿಸಾನ್ ಯೋಜನೆ ಹಾಗೂ ಕೃಷಿ ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ ಹಾಗೂ ಇನ್ನಿತರ ಇಲಾಖೆಗಳ ಸೌಲಭ್ಯಗಳನ್ನು ಪಡೆಯಲು ರೈತರು ಫ್ರೂಟ್ಸ್ ತಂತ್ರಾಂಶದಲ್ಲಿ ಕಡ್ಡಾಯವಾಗಿ ತಮ್ಮ ಎಲ್ಲಾ ಜಮೀನಿನ ವಿವರಗಳನ್ನು ನೋಂದಾಯಿಸಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಜಾವೀದಾ ನಸೀಮಾ ಖಾನಂ ತಿಳಿಸಿದ್ದಾರೆ.

ರೈತರು ಆಧಾರ್ ಕಾರ್ಡ್ ಜೋಡಣೆಯಾಗಿರುವ ಮೊಬೈಲ್, ಬ್ಯಾಂಕ್ ಪಾಸ್ ಬುಕ್ ಜೆರಾಕ್ಸ್ ಹಾಗೂ ಎಲ್ಲಾ ಪಹಣಿಗಳೊಂದಿಗೆ ಸಮೀಪದ ರೈತ ಸಂಪರ್ಕ ಕೇಂದ್ರ ಕಂದಾಯ, ತೋಟಗಾರಿಕೆ, ರೇಷ್ಮೆ ಇಲಾಖಾ ಕಛೇರಿಗಳನ್ನು ಸಂಪರ್ಕಿಸಿ ಫ್ರೂಟ್ಸ್ ಐಡಿ ಮಾಡಿಸಬೇಕು ಎಂದು ಹೇಳಿದ್ದಾರೆ.

ಮಾಡಿಸದಿದ್ದರೆ ರೈತರು ಕೇಂದ್ರ ಅಥವಾ ರಾಜ್ಯ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಬಹುದು ಎಂದು ತಿಳಿಸಿದ್ದಾರೆ.

***************

ಉತ್ತರಕನ್ನಡ ಜಿಲ್ಲೆಯ ಸಿದ್ದಾಪುರ, ಹೊನ್ನಾವರ, ಜೊಯಿಡಾ, ಶಿರಸಿ ಹಾಗೂ ಅಂಕೋಲಾ ಸೇರಿದಂತೆ ಒಟ್ಟು ಐದು ತಾಲೂಕುಗಳಲ್ಲಿ ಮಂಗನಕಾಯಿಲೆ ಕಾಣಿಸಿಕೊಂಡಿದೆ. ಈ ಐದೂ ತಾಲೂಕುಗಳಲ್ಲಿ ಮಂಗನಕಾಯಿಲೆ ನಿಯಂತ್ರಣಕ್ಕಾಗಿ ಕಳೆದ ಜುಲೈ ತಿಂಗಳಿನಿಂದಲೇ ಆರೋಗ್ಯ ಇಲಾಖೆ ಹಲವು ನಿಯಂತ್ರಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಈ ಕುರಿತಂತೆ ಮಾಹಿತಿ ನೀಡಿರುವ ಕೆಎಫ್‌ಡಿ ವೈದ್ಯಾಧಿಕಾರಿ ಡಾ.ಸತೀಶ ಶೇಟ್, ಐದು ತಾಲೂಕುಗಳ ಮನೆಮನೆಗೆ ಆರೋಗ್ಯ ಕಾರ್ಯಕರ್ತರು ತೆರಳಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಬಗ್ಗೆ ಕರಪತ್ರ ವಿತರಿಸುತ್ತಿದ್ದಾರೆ. ಸುಮಾರು 21 ಸಾವಿರ ಮನೆಗಳಿಗೆ ವಿಶೇಷ ತೈಲವನ್ನು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

*******ಮುಕ್ತಾಯ*******